ಶ್ರೀ ಕೆ.ಎಸ್. ಪುಟ್ಟಣ್ಣಯ್ಯ: ತಮ್ಮ ಮೂಲಕ ಸರ್ಕಾರಕ್ಕೆ ಕೇಳಿಕೊಳ್ಳುತ್ತೇನೆ. ಅವರನ್ನು ಕರೆದು ಮಾತನಾಡಿ, ಅವರಿಗೆ ಏನು ಸಹಾಯ ಮಾಡಬಹುದೋ ಅಷ್ಟಾದರೂ ಮಾಡಿ ಕೊಡಿ.

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್: ಮಾನ್ಯ ಕೃಷಿ ಸಚಿವರ ಗಮನಕ್ಕೆ ಆ ವಿಚಾರ ತರುತ್ತೇನೆ.

7. **ವಿಷಯ:** ತರೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಡಿಪೋ ನಿರ್ಮಾಣಕ್ಕೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವ ಬಗ್ಗೆ:

ಡಾ॥ ಉಮೇಶ್ ಜಿ. ಜಾಧವ್ (ಶ್ರೀ ಜಿ.ಹೆಚ್. ಶ್ರೀನಿವಾಸ್, ತರೀಕೆರೆ ಶಾಸಕರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, ಮಾನ್ಯ ಶ್ರೀನಿವಾಸ್‌ರವರು ಅವರ ಪರವಾಗಿ ಕೇಳುವುದಕ್ಕೆ ನನಗೆ authorise ಮಾಡಿದ್ದಾರೆ. ತರೀಕೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಸಾರಿಗೆ ಸಂಸ್ಥೆಯ ಬಸ್ ಡಿಪೋ ನಿರ್ಮಾಣಕ್ಕೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಸಕ್ಕರೆ ಮತ್ತು ಸಹಕಾರ ಸಚಿವರು) (ಸಾರಿಗೆ ಸಚಿವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ; ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಮುಂದಿನ ದಿನಗಳ ಕಾರ್ಯಾಚರಣೆಯ ಅವಶ್ಯಕತೆಗಾಗಿ ತರೀಕೆರೆ ತಾಲ್ಲೂಕು ಕಸಬಾ ಹೋಬಳಿಯಲ್ಲಿನ ಕೆ.ಹೊಸೂರು ಗ್ರಾಮದ ಸರ್ವೆ ಸಂಖ್ಯೆ: 43 ರಲ್ಲಿ 4 ಎಕರೆ ವಿಸ್ತೀರ್ಣದ ನಿವೇಶನವನ್ನು ಘಟಕ ನಿರ್ಮಾಣಕ್ಕಾಗಿ ಪಡೆಯಲಾಗಿದ್ದು, ತಹಶೀಲ್ದಾರ್, ತರೀಕೆರೆ ತಾಲ್ಲೂಕು ರವರ ಆದೇಶ ಸಂಖ್ಯೆ: ಎನ್.ಎಲ್.ಡಿ/ಸಿಆರ್/13/2010–11 ದಿನಾಂಕ: 10.02.2015 ರನ್ವಯ ಸದರಿ ನಿವೇಶನವು ಮಂಜೂರಾಗಿದ್ದು, ನಿವೇಶನದ ಮೌಲ್ಯ ₹. 2,90,680=00 ಗಳನ್ನು ಈಗಾಗಲೇ ಸರ್ಕಾರಕ್ಕೆ ಪಾವತಿಸಿ

ನಿವೇಶನಕ್ಕೆ ಸಂಬಂಧಪಟ್ಟ ಪಹಣಿ ಮತ್ತು ಮ್ಯೂಟೇಶನ್ ಪ್ರತಿಗಳನ್ನು ಪಡೆದುಕೊಳ್ಳಲಾಗಿರುತ್ತದೆ. ಸದರಿ ನಿವೇಶನದ ಸರ್ವೆ ಕೈಗೊಂಡು ಕ.ರಾ.ರ.ಸಾ.ನಿಗಮಕ್ಕೆ ಹಸ್ತಾಂತರ ಮಾಡಿಕೊಳ್ಳುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಕ.ರಾ.ರ.ಸಾ.ನಿಗಮವು ಹೋಬಳಿ/ತಾಲ್ಲೂಕು/ಜಿಲ್ಲಾ ಕೇಂದ್ರಗಳಲ್ಲಿ ನೂತನ ಬಸ್ ಘಟಕಗಳನ್ನು ಸ್ಥಾಪಿಸುವ ಬಗ್ಗೆ ಮಾರ್ಗಸೂಚಿಯನ್ನು (Norms & Guidelines) ಪರಿಷ್ಕೃತ ಸುತ್ತೋಲೆ ಸಂಖ್ಯೆ:01/2015–16, ದಿನಾಂಕ:06–06–2015ರ ಮೂಲಕ ಹೊರಡಿಸಿರುತ್ತದೆ. ಪ್ರಸ್ತುತ ಸಾರಿಗೆ ನಿಗಮದ ಆರ್ಥಿಕ ಪರಿಸ್ಥಿತಿ ತುಂಬಾ ಜಠಿಲವಾಗಿರುತ್ತದೆ. ತರೀಕೆರೆಯಲ್ಲಿ ಬಸ್ ಘಟಕ ನಿರ್ಮಿಸುವ ಕಾಮಗಾರಿ ಕೆಲಸಕ್ಕಾಗಿ 2015–16ನೇ ಸಾಲಿನ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿರುವುದಿಲ್ಲ. ಆದುದರಿಂದ ಮುಂದಿನ ದಿನಗಳಲ್ಲಿ ಈ ಮಾರ್ಗಸೂಚಿಯ ನಿಯಮಗಳ ಪ್ರಕಾರ ಹಾಗೂ ಸಾರಿಗೆ ಅವಶ್ಯಕತೆ ಮತ್ತು ನಿಗಮದ ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ತರೀಕೆರೆಯಲ್ಲಿ ಬಸ್ ಘಟಕ ಸ್ಥಾಪಿಸುವುದರ ಬಗ್ಗೆ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು.

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಸಹಕಾರ ಸಚಿವರು) (ಸಾರಿಗೆ ಸಚಿವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, ಈಗಾಗಲೇ ಅವರಿಗೆ ಉತ್ತರದಲ್ಲಿ ಕೊಟ್ಟಿದ್ದೇವೆ. ಅವಶ್ಯಕತೆ ಮತ್ತು ನಿಗಮದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿರಿಸಿಕೊಂಡು ತರೀಕೆರೆಯಲ್ಲಿ ಒಂದು ಬಸ್ ಘಟಕವನ್ನು ಸ್ಥಾಪನೆ ಮಾಡುವುದಕ್ಕೆ ಪರಿಶೀಲನೆ ಮಾಡುತ್ತೇವೆಂದು ನಾವು ಹೇಳಿರುತ್ತೇವೆ.

ಡಾ॥ ಉಮೇಶ್ ಜಿ. ಜಾಧವ್: ಪ್ರಸ್ತುತ ಸಾರಿಗೆ ನಿಗಮ ಪರಿಸ್ಥಿತಿ ತುಂಬಾ ಜಟಿಲವಾಗಿರುತ್ತದೆಂದು ಉತ್ತರ ಕೊಟ್ಟಿರುತ್ತಾರೆ. ಆದ್ಯತೆ ಮೇರೆಗೆ ಆದಷ್ಟು ಬೇಗ ಕೆಲಸ ಮಾಡಬೇಕು.

ಉಪಾಧ್ಯಕ್ಷರು: ಮಾಡುತ್ತಾರೆ ಬಿಡಿ, ಹೇಳಿದ್ದಾರೆ. ಹೆಚ್.ಎಸ್.ಶಿವಶಂಕರ್ ಇಲ್ಲ, ಸಾ.ರಾ.ಮಹೇಶ್, ಸಿ.ಎನ್.ಬಾಲಕೃಷ್ಣ, ಹೆಚ್.ಡಿ.ರೇವಣ್ಣ ಇಲ್ಲ, ಚಲುವರಾಯಸ್ವಾಮಿ ಇಲ್ಲ.